ಗುಡಿ ಕೈಗಾರಿಕೆ ಸ್ಥಾಪನೆ

319 (805) ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಗೃಹ ಮತ್ತು ಸಣ್ಣ ಕೈಗಾರಿಕಾ ಸ್ಥಾಪನೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

ಆ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ನಿರುದ್ಯೋಗಿ ಯುವಕ/ಯುವತಿಯರಿಗೆ ಮೂಲಭೂತ ಸೌಲಭ್ಯಗಳನ್ನು ಸರ್ಕಾರ ಕಲ್ಪಿಸಲು ಉದ್ದೇಶಿಸಿದೆಯೇ;

ಇ) ಹಾಗಿದ್ದಲ್ಲಿ, ಯೋಜನೆಗಳ ವಿವರ ನೀಡುವುದು?

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಕೈಗಾರಿಕೆ ಸಚಿವರು):

ಅ) ಎಲ್ಲಾ ಜಿಲ್ಲೆಗಳಲ್ಲಿಯೂ ಲಭ್ಯವಿರುವ ಸಂಪನ್ಮೂಲಗಳನ್ನಾಧರಿಸಿ ಸ್ಥಾಪಿಸಬಹುದಾದ ಕೈಗಾರಿಕೆಗಳ ಬಗ್ಗೆ ಜಿಲ್ಲಾ ಸಮೀಕ್ಷಾ ವರದಿಯನ್ನು ತಯಾರಿಸಲಾಗಿದೆ. ಗೃಹ ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಇಚ್ಛಿಸುವ ಉದ್ಯಮಿಗಳಿಗೆ ಪ್ರೇರೇಪಣೆ ನೀಡಲು ಅವಶ್ಯವಿರುವ ಉದ್ಯಮಶೀಲತಾ ಅಭಿವೃದ್ಧಿ ಹಾಗೂ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಟೆಕ್ಸಾಸ್ ಮತ್ತು ಸಿಡಾಕ್ಸ್ ಸಂಸ್ಥೆಯವರಿಂದ ಹಮ್ಮಿಕೊಳ್ಳಲಾಗಿರುತ್ತದೆ. ತರಬೇತಿ ನಂತರ ಅವರಿಗೆ ಅವಶ್ಯವಾದ ಮೂಲಭೂತ ಸೌಕರ್ಯಗಳನ್ನು ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿಯ ಮೂಲಕ ಮಂಜೂರಾತಿ ನೀಡಲಾಗುತ್ತಿದೆ. ಕೈಗಾರಿಕೆಗಳನ್ನು ಸ್ಥಾಪಿಸಲು ರಾಜ್ಯದ ಕೈಗಾರಿಕಾ ನೀತಿಯಂತೆ ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತಿದೆ.

ಆ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಸಲುವಾಗಿ ಉದ್ದಿಮೆದಾರರಿಗೆ ಅನುಕೂಲವಾಗುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಸರ್ಕಾರವು ಕೈಗಾರಿಕಾ ಪ್ರದೇಶ/ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಿ ಮೂಲಭೂತ ಸೌಕರ್ಯಗಳಾದ ನಿವೇಶನ, ವಿದ್ಯುಚ್ಛಕ್ತಿ, ನೀರು, ರಸ್ತೆ, ಒಳಚರಂಡಿ ಮತ್ತಿತರ ಸೌಕರ್ಯಗಳನ್ನು ಕಲ್ಪಿಸಲಾಗಿರುತ್ತದೆ.

ಇ) ಅತೀ/ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿ ಸ್ಥಳೀಯ ಸಂಪನ್ಮೂಲಗಳನ್ನು ಆಧರಿಸಿ ಕೈಗಾರಿಕಾ ವಿಕಾಸ ಹಾಗೂ ವಿಶೇಷ ಅಭಿವೃದ್ಧಿ ಯೋಜನೆಗಳಡಿಯಲ್ಲಿ ಹೆಚ್ಚುವರಿ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.